ಮಂಜೂರು ಮಾಡಿಕೊಡುವಂತೆ ಕೋರಿರುತ್ತದೆ. ಹೆಚ್ಚುವರಿ ಭೂಮಿಯನ್ನು ಮಂಜೂರು ಮಾಡಿದರೆ, ಈಗ ಇರುವ ಬಸ್ ನಿಲ್ದಾಣವನ್ನು ವಿಸ್ತರಿಸಲು ಸೂಕ್ತ ಕ್ರಮವನ್ನು ತೆಗೆದುಕೊಳ್ಳಲಾಗುವುದು.

ಚಾಲಕ ಹಾಗೂ ನಿರ್ವಾಹಕರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ.

1666. ಶ್ರೀ ಕೆ.ಎಸ್. ಕಾಳಮರಿಗೌಡ (ಪಿರಿಯಾಪಟ್ಟಣ) : ಮಾನ್ಯ ಸಾರಿಗೆ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದ ಸಾರಿಗೆ ಸಂಸ್ಥೆಯು ಡ್ರೈವರ್ ಮತ್ತು ಕಂಡಕ್ಟರ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಜಿಗಳನ್ನು ಕರೆದಿದ್ದು ನಿಜವೇ?

ಆ) ಈ ನೇಮಕಾತಿಗಳನ್ನು ತಡೆಹಿಡಿದಿರಲು ಕಾರಣವೇನು? ಮತ್ತೆ ಯಾವಾಗ ನೇಮಕಾತಿಯನ್ನು ಮಾಡಲಾಗುವುದು?

ಇ) ನೇಮಕಾತಿಯನ್ನು ಮಾಡುವಾಗ ಹಿಂದೆ ಸಲ್ಲಿಸಿದ್ದ ಅರ್ಜಿಗಳನ್ನು ಪರಿಗಣಿಸಲಾಗುವುದೇ ಅಥವಾ ಹೊಸದಾಗಿ ಅರ್ಜಿಗಳನ್ನು ಸಲ್ಲಿಸಬೇಕೆ?

ಶ್ರೀ ಅಜೀಜ್ ಸೇಠ್ (ಸಾರಿಗೆ ಮತ್ತು ವಕ್ಫ್ ಸಚಿವರು) :

ಅ) ನಿಜ.

ಆ) ನೇಮಕಾತಿಗಳನ್ನು ಮಾಡುವ ಬಗ್ಗೆ ಸರ್ಕಾರವು ತಡೆಹಿಡಿದಿದೆ. ಕಾರಣ ಈಗ ಇರುವ ನೇಮಕಾತಿ ನಿಯಮಾವಳಿಗಳನ್ನು ತಿದ್ದುಪಡಿ ಮಾಡುವ ಸಲುವಾಗಿ ಸರ್ಕಾರದ ಪರಿಶೀಲನೆಯಲ್ಲಿದೆ. ಇದು ಅಂತಿಮ ತೀರ್ಮಾನವಾದ ನಂತರ. ನೇಮಕಾತಿಗಳನ್ನು ಮಾಡುವ ಬಗ್ಗೆ ಸೂಕ್ತ ಕ್ರಮವನ್ನು ತೆಗೆದುಕೊಳ್ಳಲಾಗುವುದು.

ಇ) ಈಗಾಗಲೇ ಸಲ್ಲಿಸಿರುವ ಅರ್ಜಿಗಳನ್ನು ಪರಿಗಣಿಸಲಾಗುವುದು. ಅಂತಹ ಅಭ್ಯರ್ಥಿಗಳು ಹೊಸದಾಗಿ ಪುನಃ ಅರ್ಜಿಗಳನ್ನು ಸಲ್ಲಿಸಬೇಕಾಗುವುದಿಲ್ಲ.

ಎ.ಪಿ.ಎಂ.ಸಿ. ಹಣದ ಬಿಡುಗಡೆ ಬಗ್ಗೆ

1974. ಶ್ರೀ ಎಂ. ನಾರಾಯಣಸ್ವಾಮಿ (ಬೇತಮಂಗಲ) : ಮಾನ್ಯ ಸಹಕಾರ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಎ.ಪಿ.ಎಂ.ಸಿ. ನಿಧಿಯಿಂದ ಪ್ರತಿ ವಿಧಾನ ಸಭಾ ಕ್ಷೇತ್ರಕ್ಕೆ 12 ಲಕ್ಷ ರೂಪಾಯಿ ಬಿಡುಗಡೆ ಮಾಡುವ ಯೋಜನೆ ಸರ್ಕಾರದ ಗಮನದಲ್ಲಿ ಇದೆಯೆ ?

ಆ) ಈ ವಿಚಾರದ ಬಗ್ಗೆ ಅನೇಕ ಬಾರಿ ಸರ್ಕಾರವು ಆಶ್ವಾಸನೆ ಕೊಟ್ಟಿರುವುದು ನಿಜವೆ ?

ಇ) ಹಾಗಿದ್ದರೆ ಈ ಯೋಜನೆಯನ್ನು ಯಾವಾಗ ಜಾರಿಗೆ ತರಲಾಗುತ್ತದೆ ?

ಶ್ರೀ ಎಸ್.ಆರ್. ಮೋರೆ (ಸಹಕಾರ ರಾಜ್ಯ ಸಚಿವರು) :

ಅ) ಇಲ್ಲ.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ಆದಾಗ್ಯೂ ಮಾರುಕಟ್ಟೆ ಸಮಿತಿಗಳ ಹೆಚ್ಚುವರಿ ಉಳಿತಾಯದ ಹಣದಿಂದ ಗೊತ್ತುಪಡಿಸಬಹುದಾದ ಕೆಲವು ಮೂಲಭೂತ ಸೌಲಭ್ಯಗಳನ್ನು ಒದಗಿಸುವಲ್ಲಿ 1991ರಲ್ಲಿ ಕೃಷಿ ಉತ್ಪನ್ನ ಮಾರಾಟ (ನಿ) ಕಾಯ್ದೆ 1966ಕ್ಕೆ ತಿದ್ದುಪಡಿ ಮಾಡಲಾಗಿದೆ. ಅದರಂತೆ 1968ರ ಕೃಷಿ ಉತ್ಪನ್ನ ಮಾರಾಟ (ನಿ) ನಿಯಮಾವಳಿಗೆ ಮಾರುಕಟ್ಟೆ ಕ್ಷೇತ್ರದಲ್ಲಿ ಒದಗಿಸಬಹುದಾದ ಮೂಲಭೂತ ಸೌಲಭ್ಯಗಳನ್ನು ಗೊತ್ತುಪಡಿಸಿ ತಿದ್ದುಪಡಿ ಮಾಡಬೇಕಾಗಿದೆ. ಈ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಎಂ. ವೀರಪ್ಪ ಮೊಯಿಲಿ : ಮಾನ್ಯ ಉಪಾಧ್ಯಕ್ಷರೆ, ದಿನಾಂಕ 18-3-1992 ರಂದು ಲಿಖಿತ ಮೂಲಕ ಉತ್ತರಿಸುವ 17ನೇ ಪಟ್ಟಿಯಲ್ಲಿರುವ 68 ಪ್ರಶ್ನೆಗಳ ಪೈಕಿ 16 ಪ್ರಶ್ನೆಗಳನ್ನು ಹೊರತುಪಡಿಸಿ, ಉಳಿದ 52 ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಖಾಸಗಿ ವ್ಯಕ್ತಿಗಳಿಂದ ವಿದ್ಯುಚ್ಛಕ್ತಿ ಉತ್ಪಾದನೆಗೆ ಹಣ ಹೂಡಿಕೆ ಮಾಡುವ ಬಗ್ಗೆ.

1265. ಶ್ರೀ ಎಂ.ವಿ. ವೆಂಕಟಪ್ಪ (ಮುಳಬಾಗಿಲು) : ಮಾನ್ಯ ಇಂಧನ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿ ವಿದ್ಯುಚ್ಛಕ್ತಿಯ ಅಭಾವವನ್ನು ನೀಗಿಸಲು ಸರ್ಕಾರದವರು ಖಾಸಗಿಯವರೊಡನೆ ಕರಾರು ಮಾಡಿಕೊಂಡು ವಿದ್ಯುಚ್ಛಕ್ತಿ ಉತ್ಪಾದನೆ ಮಾಡಲು ಆಲೋಚಿಸಿದ್ದಾರೆಯೇ ?

ಆ) ಹಾಗಿದ್ದಲ್ಲಿ ಅಂತಹ ಖಾಸಗೀ ವ್ಯಕ್ತಿಗಳು ಎಷ್ಟು ಮಂದಿ ಮುಂದೆ ಬಂದಿದ್ದಾರೆ ?

ಇ) ಅವರುಗಳು ಹೂಡಲಿಚ್ಛಿಸಿರುವ ಹಣದ ಮೊತ್ತವೆಷ್ಟು (ಅದರ ಹೆಸರುಗಳೇನು)?

ಈ) ಅವರುಗಳ ಪೈಕಿ (ಎಲ್‌ಆರ್‌ಐ) ಪರದೇಶದಲ್ಲಿರುವ ಭಾರತೀಯರೆಷ್ಟು ?

ಉ) ಖಾಸಗಿಯವರು ಹೂಡಬೇಕೆಂದಿರುವ ಹಣದಿಂದ ಅಂದಾಜು ಎಷ್ಟು ಮೆವ್ಯಾಟ್ ವಿದ್ಯುಚ್ಛಕ್ತಿ ಉತ್ಪತ್ತಿಯಾಗುವ ಸಂಭವವಿದೆ ?

ಶ್ರೀ ಎಂ. ರಾಮಪ್ಪ (ಇಂಧನ ರಾಜ್ಯ ಮಂತ್ರಿಗಳು) :

ಅ) ಹೌದು.

ಆ) ಎಂಟು ಮಂದಿ ಖಾಸಗಿ ವ್ಯಕ್ತಿಗಳು.

ಇ) ಈ ಕೆಳಗಿನ ಸಂಸ್ಥೆಗಳು ಜಲ / ಶಾಖೋತ್ಪನ್ನ ವಿದ್ಯುತ್ ಕೇಂದ್ರಗಳನ್ನು ಸ್ಥಾಪಿಸಲು ಉತ್ಸಾಹ ತೋರಿಸಿವೆ.